# National
# Kannada
# 09.01.2026 7.35 pm

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ದೇಶ, ರಕ್ಷಣಾ ಉತ್ಪಾದನೆಯಲ್ಲಿ ಸ್ವಾವಲಂಬನೆಯತ್ತ ಸಾಗುತ್ತಿದೆ -ರಕ್ಷಣಾ ಸಚಿವ ರಾಜನಾಥ್ ಸಿಂಗ್

೨. ಬಾಂಬ್ ಸ್ಫೋಟ ಸಂಬಂಧಿತ ಘಟನೆಗಳ ನಿಖರವಾದ ವಿಶ್ಲೇಷಣೆಗೆ ಡಿಜಿಟಲ್ ವೇದಿಕೆ ಅನಾವರಣಗೊಳಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ

೩. ಪ್ರಸಾರ ಭಾರತಿಯ ವೇವ್ಸ್ ವೇದಿಕೆಯಿಂದ ಐದು ಸಾವಿರ ಕೋಟಿ ರೂಪಾಯಿಗಳ ಅಂತಾರಾಷ್ಟ್ರೀಯ ವ್ಯವಹಾರಕ್ಕೆ ಅನುಕೂಲ- ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

೪. ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್; ಮುಂಬೈ ವಿರುದ್ಧ ಟಾಸ್ ಗೆದ್ದ ಆರ್‌ಸಿಬಿ ಫೀಲ್ಡಿಂಗ್ ಆಯ್ಕೆ

**<>><><*><><<>**

ದೇಶದ ರಕ್ಷಣಾ ವಲಯವು, ಇಂದು ರಕ್ಷಣಾ ಉತ್ಪಾದನೆಯಲ್ಲಿ ಸ್ವಾವಲಂಬಿಯಾಗುವತ್ತ ಸಾಗುತ್ತಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಉತ್ತರ ಪ್ರದೇಶದ ತಮ್ಮ ಸ್ವಕ್ಷೇತ್ರ ಲಕ್ನೋದ ಸರೋಜಿನಿ ನಗರ ಪ್ರದೇಶದಲ್ಲಿ ಅಶೋಕ್ ಲೇಲ್ಯಾಂಡ್ ಎಲೆಕ್ಟ್ರಿಕ್ ವೆಹಿಕಲ್ ಕಾರ್ಖಾನೆ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರವು ಅನೇಕ ನಿಯಮಗಳನ್ನು ಸರಳೀಕರಿಸಿದೆ ಮತ್ತು ಅಗತ್ಯ ಕ್ರಮಗಳನ್ನು ತೆಗೆದುಕೊಂಡಿದೆ, ಇದು ಹೂಡಿಕೆದಾರರು ಮತ್ತು ವ್ಯವಹಾರದ ನಂಬಿಕೆಯನ್ನು ಹೆಚ್ಚಿಸಿದೆ ಎಂದು ಹೇಳಿದರು. ಈ ಹಿಂದೆ ವಾರ್ಷಿಕವಾಗಿ ೪೬ ಸಾವಿರ ಕೋಟಿ ರೂಪಾಯಿಗಳಷ್ಟಿದ್ದ ರಕ್ಷಣಾ ಉತ್ಪಾದನೆಯು, ಪ್ರಸ್ತುತ ೧೫ ಲಕ್ಷ ಕೋಟಿ ರೂಪಾಯಿಗಳಿಗೆ ಹೆಚ್ಚಾಗಿದೆ. ರಕ್ಷಣಾ ವಲಯದಲ್ಲಿ ರಫ್ತು ಕೂಡ ಹಲವು ಪಟ್ಟು ಹೆಚ್ಚಾಗಿದೆ. ಈ ಹಿಂದೆ ವಾರ್ಷಿಕವಾಗಿ ಒಂದು ಸಾವಿರ ಕೋಟಿ ರೂಪಾಯಿಗಳಷ್ಟಿದ್ದ ಉತ್ಪಾದನೆ, ಈಗ ಸುಮಾರು ೨೫ ಸಾವಿರ ಕೋಟಿ ರೂಪಾಯಿಗಳಿಗೆ ಏರಿಕೆಯಾಗಿದೆ. ೨೦೨೯-೩೦ ರ ವೇಳೆಗೆ ಇದು ೫೦ ಸಾವಿರ ಕೋಟಿ ರೂಪಾಯಿಗಳನ್ನು ದಾಟುವ ನಿರೀಕ್ಷೆಯಿದೆ ಎಂದು ಸಚಿವರು ತಿಳಿಸಿದರು. ಕೇಂದ್ರ ಸಚಿವರಾದ ನಿತಿನ್ ಗಡ್ಕರಿ ಮತ್ತು ಎಚ್.ಡಿ ಕುಮಾರಸ್ವಾಮಿ, ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಸಮಾರಂಭದಲ್ಲಿ ಭಾಗವಹಿಸಿದ್ದರು.

**<>><><*><><<>**

ಬಾಂಬ್ ಸ್ಫೋಟ ಸಂಬಂಧಿತ ಘಟನೆಗಳ ನಿಖರವಾದ ವಿಶ್ಲೇಷಣೆಗಾಗಿ ಡಿಜಿಟಲ್ ವೇದಿಕೆಯನ್ನು ಅನಾವರಣಗೊಳಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಭಯೋತ್ಪಾದನೆಯ ವಿರುದ್ಧದ ಕಠಿಣ ನಿಲುವನ್ನು ಪುನರುಚ್ಚರಿಸಿದರು. ಅವರು, ಅಯೋಧ್ಯೆಯಲ್ಲಿ ಹೊಸ ರಾಷ್ಟ್ರೀಯ ಭದ್ರತಾ ಸಿಬ್ಬಂದಿ- ಎನ್‌ಸಿಜಿ ಯ ಪ್ರಾದೇಶಿಕ ಕೇಂದ್ರ ಸ್ಥಾಪಿಸಲು ಮಾಡಲಾಗುತ್ತಿರುವ ಕೆಲಸದ ವಿವರಗಳನ್ನು ಸಚಿವರು ಪರಿಶೀಲಿಸಿದರು. ಭಯೋತ್ಪಾದಕ ಚಟುವಟಿಕೆಗಳನ್ನು ತನಿಖೆ ಮಾಡುವಲ್ಲಿ, ಸ್ಫೋಟಗಳಲ್ಲಿನ ಪ್ರವೃತ್ತಿಗಳನ್ನು

ಅರ್ಥಮಾಡಿಕೊಳ್ಳುವಲ್ಲಿ ಮತ್ತು ಅವುಗಳ ವಿರುದ್ಧ ಪರಿಣಾಮಕಾರಿ ಕಾರ್ಯತಂತ್ರಗಳನ್ನು ರೂಪಿಸುವಲ್ಲಿ ಡಿಜಿಟಲ್ ವೇದಿಕೆ ಅತ್ಯಂತ ಮುಖ್ಯವೆಂದು ಸಾಬೀತುಪಡಿಸುತ್ತದೆ ಎಂದು ಸಚಿವ ಅಮಿತ್ ಶಾ ಹೇಳಿದರು. ದೇಶದಲ್ಲಿ ಈವರೆಗೆ ಸಂಭವಿಸಿದ ಬಾಂಬ್ ಸ್ಫೋಟಗಳ ಮಾದರಿಗಳು, ಕಾರ್ಯಾಚರಣೆಯ ವಿಧಾನ ಮತ್ತು ಬಳಸಿದ ಸ್ಫೋಟಕಗಳನ್ನು ನಿಖರವಾಗಿ ವಿಶ್ಲೇಷಿಸಲು ರಾಷ್ಟ್ರೀಯ ಐಇಡಿ ದತ್ತಾಂಶ ನಿರ್ವಹಣಾ ವ್ಯವಸ್ಥೆ-ಎನ್ಐಡಿಎಮ್ಎಸ್ ಒಂದು ಬಲಿಷ್ಠ ವೇದಿಕೆಯಾಗಲಿದೆ. ಎಂದು ವೀಡಿಯೊ ಕಾನ್ಫರೆನ್ಸಿಂಗ್ ಮೂಲಕ ವೇದಿಕೆಯನ್ನು ಉದ್ಘಾಟಿಸಿದ ನಂತರ ಗೃಹ ಸಚಿವರು ಹೇಳಿದರು.

**<>><><*><><<>**

ಪ್ರಸಾರ ಭಾರತಿಯ ವೇವ್ಸ್ ವೇದಿಕೆಯು ವ್ಯಾಪಕ ಜಾಗತಿಕ ಮೆಚ್ಚುಗೆಯನ್ನು ಪಡೆದಿದೆ ಹಾಗೂ ಐದು ಸಾವಿರ ಕೋಟಿ ರೂಪಾಯಿಗಳ ಅಂತಾರಾಷ್ಟ್ರೀಯ ವ್ಯವಹಾರಕ್ಕೆ ಅನುಕೂಲ ಮಾಡಿಕೊಟ್ಟಿದೆ ಎಂದು ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಕ್ರಿಯೇಟರ್ಸ್ ಕಾರ್ನರ್‌ಗೆ ಚಾಲನೆ ನೀಡಿ ಮಾತನಾಡಿದ ಸಚಿವರು, ಪ್ರಸಾರ ಭಾರತಿಯ ಹೊಸ ಉಪಕ್ರಮವು ಸೃಜನಶೀಲ ವಿಷಯವನ್ನು ಪ್ರದರ್ಶಿಸುವ ಮತ್ತು ಉತ್ತೇಜಿಸುವ ಗುರಿಯನ್ನು ಹೊಂದಿದೆ. ಸರ್ಕಾರ, ಒಂದು ಕೋಟಿ ಯುವಕರನ್ನು ಕಂಟೆಂಟ್ ಕ್ರಿಯೇಟರ್ ಆರ್ಥಿಕತೆಗೆ ಸೆಳೆಯುವ ಗುರಿ ಹೊಂದಿದೆ ಎಂದು ಸಚಿವರು ಹೇಳಿದರು.

ಹೊಸ ಕಾರ್ಯಾಚರಣಾ ವ್ಯವಸ್ಥೆಯ ಅಭಿವೃದ್ಧಿ ಸೇರಿದಂತೆ ವಾರ್ತಾ ಮತ್ತು ಪ್ರಸಾರ ಸಚಿವಾಲಯವು, ಈ ವರ್ಷ ಸಂಪೂರ್ಣ ಪುನರ್‌ರಚನೆಗೆ ಒಳಗಾಗಲಿದೆ. ಇಂದಿನ ತಂತ್ರಜ್ಞಾನ, ಉತ್ಪಾದನೆ ಮತ್ತು ಕಾರ್ಯ ವಿಧಾನಗಳೊಂದಿಗೆ ಹೊಂದಿಕೆಯಾಗುವಂತೆ ಪ್ರಸಾರದ ಪ್ರಾಮುಖ್ಯತೆಯನ್ನು ಪುನಃಸ್ಥಾಪಿಸುವ ಸುಧಾರಣೆಗಳನ್ನು ಪರಿಚಯಿಸುವುದು ಅತ್ಯಗತ್ಯ. ಈ ಸುಧಾರಣೆಗಳು ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ನಿರೀಕ್ಷೆಯಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ, ಮಾಹಿತಿ ಮತ್ತು ಪ್ರಸಾರ ಖಾತೆಯ ರಾಜ್ಯ ಸಚಿವ ಡಾ. ಎಲ್.ಮುರುಗನ್ ಉಪಸ್ಥಿತರಿದ್ದರು.

**<>><><*><><<>**

ದೇಶದಲ್ಲಿ ಮಾದಕದ್ರವ್ಯಗಳ ಸಮಸ್ಯೆಯನ್ನು ಎದುರಿಸಲು ಸಾಮೂಹಿಕ ರಾಷ್ಟ್ರೀಯ ಪ್ರಯತ್ನವನ್ನು ಪರಿಶೀಲಿಸಲು ಮತ್ತು ನಿರ್ಣಯಿಸಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ಸಂಜೆ ೯ನೇ ಉನ್ನತ ಮಟ್ಟದ ನಾರ್ಕೊ ಸಮನ್ವಯ ಕೇಂದ್ರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಭೆಯಲ್ಲಿ ಸಚಿವಾಲಯಗಳು ಮತ್ತು ಇಲಾಖೆಗಳ ಅಧಿಕಾರಿಗಳು, ರಾಜ್ಯ ಸರ್ಕಾರಗಳ ಪ್ರತಿನಿಧಿಗಳು ಮತ್ತು ಮಾದಕದ್ರವ್ಯ ಕಾನೂನುಜಾರಿ ಸಂಸ್ಥೆಗಳ ಅಧಿಕಾರಿಗಳು ಭಾಗವಹಿಸಿದ್ದು, ಮಾದಕದ್ರವ್ಯ ಜಾಲವನ್ನು ಸಂಪೂರ್ಣವಾಗಿ ಬೇಧಿಸುವುದು ಮತ್ತು ಎಲ್ಲಾ ಕೋನಗಳಿಂದಲೂ ತನಿಖೆಯನ್ನು ಚುರುಕುಗೊಳಿಸುವುದು ಸೇರಿದಂತೆ ಹಲವು ವಿಷಯಗಳ ಕುರಿತು ಸಭೆ ಗಮನಹರಿಸಲಿದೆ.

**<>><><*><><<>**

ಇಂದು ಪ್ರವಾಸಿ ಭಾರತೀಯ ದಿವಸ್ ಆಚರಿಸಲಾಗುತ್ತಿದ್ದು, ಮಹಾತ್ಮಾ ಗಾಂಧಿ ದಕ್ಷಿಣ ಆಫ್ರಿಕಾದಿಂದ ಭಾರತಕ್ಕೆ ಹಿಂದಿರುಗಿದ ದಿನದಂದು ಪ್ರತಿ ವರ್ಷ ಜನವರಿ ೯ ರಂದು ಈ ದಿನವನ್ನು ಆಚರಿಸಲಾಗುತ್ತದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ವಿದೇಶಾಂಗ ಸಚಿವಾಲಯ, ಭಾರತೀಯ ವಲಸಿಗರು ದೇಶದ ಸಂಪ್ರದಾಯಗಳು, ವಿಚಾರಗಳು ಮತ್ತು ಮೌಲ್ಯಗಳನ್ನು ಖಂಡಗಳು ಮತ್ತು ಸಂಸ್ಕೃತಿಗಳಲ್ಲಿ ಸಾಗಿಸಿದ್ದು, ಭಾರತ ಮತ್ತು ಪ್ರಪಂಚವನ್ನು ಸಂಪರ್ಕಿಸುವ ಜೀವಂತ ಸೇತುವೆ ಎಂದು ತಿಳಿಸಿದೆ.

<>><><*><><<>

ಭಾರತ, ಅಮೆರಿಕದ ಜೊತೆ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಮಾತುಕತೆಗೆ ಬದ್ಧವಾಗಿವೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ. ನವದೆಹಲಿಯಲ್ಲಿ ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಸಮತೋಲಿತ ಮತ್ತು ಪರಸ್ಪರ ಲಾಭದಾಯಕ ವ್ಯಾಪಾರ ಒಪ್ಪಂದಕ್ಕೆ ಬರಲು ಎರಡೂ ಕಡೆಯವರು ಹಲವು ಸುತ್ತಿನ ಮಾತುಕತೆ ನಡೆಸಿದ್ದಾರೆ. ಭಾರತವು ಎರಡು ಪೂರಕ ಆರ್ಥಿಕತೆಗಳ ನಡುವಿನ ಪರಸ್ಪರ ಪ್ರಯೋಜನಕಾರಿ ವ್ಯಾಪಾರ ಒಪ್ಪಂದದಲ್ಲಿ ಆಸಕ್ತಿ ಹೊಂದಿದೆ ಮತ್ತು ಅದನ್ನು ಮುಕ್ತಾಯಗೊಳಿಸಲು ಎದುರು ನೋಡುತ್ತಿದೆ ಎಂದು ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೂಡ ೨೦೨೫ ರಲ್ಲಿ ಎಂಟು ಬಾರಿ ಫೋನ್‌ನಲ್ಲಿ ಮಾತನಾಡಿದ್ದಾರೆ, ಇದು ವ್ಯಾಪಕ ಶ್ರೇಣಿಯ ಪಾಲುದಾರಿಕೆಯ ವಿವಿಧ ಅಂಶಗಳನ್ನು ಒಳಗೊಂಡಿದೆ ಎಂದು ರಣಧೀರ್ ಜೈಸ್ವಾಲ್ ಹೇಳಿದ್ದಾರೆ.

<>><><*><><<>

ಇಂಡಿಯನ್ ಪೊಲಿಟಿಕಲ್ ಆಕ್ಷನ್ ಕಮಿಟಿ- ಐ-ಪಿಎಸಿ ಮುಖ್ಯಸ್ಥ ಪ್ರತೀಕ್ ಜೈನ್ ಅವರ ನಿವಾಸ ಮತ್ತು ಕಚೇರಿಯಲ್ಲಿ ನಿನ್ನೆ ನಡೆದ ಶೋಧ ಕಾರ್ಯಾಚರಣೆಯ ನಂತರ, ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, ಜಾರಿ ನಿರ್ದೇಶನಾಲ-ಇಡಿ ವಿರುದ್ಧ ಎರಡು ಪೊಲೀಸ್ ಠಾಣೆಗಳಲ್ಲಿ ದೂರು ದಾಖಲಿಸಿದ್ದಾರೆ. ಈ ಮಧ್ಯೆ, ಜೈನ್ ಅವರ ಮೇಲೆ ದಾಳಿ ಮತ್ತು ತನಿಖೆಗೆ ಮುಖ್ಯಮಂತ್ರಿ ಅಡ್ಡಿಪಡಿಸಿದ್ದಾರೆ ಎಂದು ಆರೋಪಿಸಿ, ಇಡಿ ಕಲ್ಕತ್ತಾ ಹೈಕೋರ್ಟ್ ಅನ್ನು ಸಂಪರ್ಕಿಸಿದೆ. ಮುಖ್ಯಮಂತ್ರಿಯವರ ಹಸ್ತಕ್ಷೇಪದಿಂದ ತಮ್ಮ ತನಿಖೆಗೆ ಅಡ್ಡಿಯಾಗಿದೆ ಎಂದು ಇಡಿ ವಕೀಲ ಧೀರಜ್ ತ್ರಿವೇದಿ ನ್ಯಾಯಮೂರ್ತಿ ಶುಭ್ರ ಘೋಷ್ ಅವರ ಪೀಠಕ್ಕೆ ಮಾಹಿತಿ ನೀಡಿದ್ದಾರೆ. ಐಪಿಎಸಿ ವಕೀಲ ಸಬ್ಯಸಾಚಿ ಬ್ಯಾನರ್ಜಿ ಮತ್ತು ಅಯಾನ್ ಭಟ್ಟಾಚಾರ್ಯ ಅವರು ತಮ್ಮ ಎಲ್ಲಾ ಫೈಲ್‌ಗಳು ಮತ್ತು ದಾಖಲೆಗಳನ್ನು ವಶಪಡಿಸಿಕೊಳ್ಳಲು ಪ್ರಯತ್ನಗಳು ನಡೆಯುತ್ತಿವೆ. ಇಡಿಯ ಶೋಧ ಕಾರ್ಯಾಚರಣೆಗಳಿಗೆ ತಕ್ಷಣ ತಡೆ ನೀಡುವಂತೆ ನ್ಯಾಯಾಲವನ್ನು ಕೋರಿದ್ದಾರೆ.

<>><><*><><<>

ಕಳೆದ ವರ್ಷ ಡಿಸೆಂಬರ್‌ನಲ್ಲಿ ಮಾಸಿಕ ವ್ಯವಸ್ಥಿತ ಹೂಡಿಕೆ ಯೋಜನೆ- ಎಸ್‌ಐಪಿ ಯ ಹೂಡಿಕೆ, ೩೧ ಸಾವಿರ ಕೋಟಿ ರೂಪಾಯಿಗಳ ಗರಿಷ್ಠ ದಾಖಲೆಮಟ್ಟ ತಲುಪಿದೆ. ನವೆಂಬರ್‌ನಲ್ಲಿ ೨೯ ಸಾವಿರ ೪೪೫ ಕೋಟಿ ರೂಪಾಯಿ ಹೂಡಿಕೆಯಾಗಿತ್ತು. ,ಭಾರತದಲ್ಲಿನ ಮ್ಯೂಚುವಲ್ ಫಂಡ್‌ಗಳ ಸಂಘದ ಮಾಹಿತಿಯ ಪ್ರಕಾರ, ಗೋಲ್ಡ್ ಇಟಿಎಫ್‌ಗಳು ಕಳೆದ ತಿಂಗಳು ೧೧ ಸಾವಿರ ೬೪೬ ಕೋಟಿ ರೂಪಾಯಿ ಹೂಡಿಕೆ ದಾಖಲಿಸಿದ್ದು, ನವೆಂಬರ್‌ನಲ್ಲಿ ೩ ಸಾವಿರ ೭೪೨ ಕೋಟಿ ರೂಪಾಯಿಗಿಂತ ಹೆಚ್ಚಾಗಿದೆ. ಹೈಬ್ರಿಡ್ ಯೋಜನೆಗಳ ಅಡಿಯಲ್ಲಿ, ಬಹು ಆಸ್ತಿ ಹಂಚಿಕೆ ನಿಧಿ ಸುಮಾರು ೭ ಸಾವಿರ ೪೨೬ ಕೋಟಿ ರೂಪಾಯಿಗಳ ಹೂಡಿಕೆಯನ್ನು ಆಕರ್ಷಿಸಿದೆ.

<>><><*><><<>

ಭಾರತ-ಯುರೋಪ್ ಒಕ್ಕೂಟ, ಮುಕ್ತ ವ್ಯಾಪಾರ ಒಪ್ಪಂದದ ಪ್ರಮುಖ ವಿಷಯಗಳ ಕುರಿತು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಬ್ರುಸೆಲ್ಸ್‌ನಲ್ಲಿ ಮಾತುಕತೆ ನಡೆಸಿದರು. ಪರಸ್ಪರ ಪ್ರಯೋಜನಕಾರಿಯಾದ ಮುಕ್ತ ವ್ಯಾಪಾರ ಒಪ್ಪಂದದ ಭಾಗವಾಗಿ, ಸಚಿವರು ಬ್ರುಸೆಲ್ಸ್‌ನಲ್ಲಿಂದು ಯುರೋಪಿಯನ್ ಒಕ್ಕೂಟದ ವ್ಯಾಪಾರ ಮತ್ತು ಆರ್ಥಿಕ ಭದ್ರತಾ ಆಯುಕ್ತ ಮಾರೋಸ್ ಸೆಫ್ಕೊವಿಕ್ ಅವರೊಂದಿಗೆ ಉನ್ನತ ಮಟ್ಟದ ಮಾತುಕತೆ ನಡೆಸಿದರು. ಈ ಸಂವಾದದ ಸಮಯದಲ್ಲಿ, ಪ್ರಸ್ತಾವಿತ ಒಪ್ಪಂದದ ಪ್ರಮುಖ ಕ್ಷೇತ್ರಗಳ ಬಗ್ಗೆ ಚರ್ಚಿಸಲಾಯಿತು. ನಿಯಮ

ಆಧಾರಿತ ವ್ಯಾಪಾರ ಚೌಕಟ್ಟು ಮತ್ತು ರೈತರು ಮತ್ತು ನವೋದ್ಯಮಗಳ ಹಿತಾಸಕ್ತಿಗಳನ್ನು ಕಾಪಾಡುವ ನಿಟ್ಟಿನಲ್ಲಿ ಆಧುನಿಕ ಆರ್ಥಿಕ ಪಾಲುದಾರಿಕೆಗೆ ಭಾರತದ ಬದ್ಧತೆಯನ್ನು ಪುನರುಚ್ಚರಿಸಲಾಗಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಸಚಿವರು ತಿಳಿಸಿದ್ದಾರೆ. ಭಾರತ, ಜವಳಿ, ಚರ್ಮ, ಉಡುಪು, ರತ್ನಗಳು ಮತ್ತು ಆಭರಣಗಳು ಮತ್ತು ಕರಕುಶಲ ವಸ್ತುಗಳಂತಹ ತನ್ನ ಕಾರ್ಮಿಕ-ತೀವ್ರ ವಲಯಗಳಿಗೆ ಶೂನ್ಯ-ಸುಂಕ ಪ್ರವೇಶಕ್ಕಾಗಿ ಒತ್ತಾಯಿಸುತ್ತಿದೆ.

<>><><*><><<>

ಬಹು ನಿರೀಕ್ಷಿತ ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯೂಪಿಎಲ್ ೨೦೨೬ರ ನಾಲ್ಕನೇ ಆವೃತ್ತಿ ಇಂದಿನಿಂದ ಪ್ರಾರಂಭವಾಗಿದೆ. ನವಿ ಮುಂಬೈನ ಡಾ.ಡಿ.ವೈ.ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಉದ್ಘಾಟನಾ ಟಿ-೨೦ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಮುಂಬೈ ಇಂಡಿಯನ್ಸ್ ಮುಖಾಮುಖಿಯಾಗಿವೆ. ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಬೌಲಿಂಗ್ ಆಯ್ಕೆ ಮಾಡಿಕೊಂಡಿದೆ.

<>><><*><><<>

ಉಕ್ರೇನ್ ಮೇಲೆ ರಷ್ಯಾ ಒರೆಶ್ನಿಕ್ ಬ್ಯಾಲಿಸ್ಟಿಕ್ ಕ್ಷಿಪಣಿಯನ್ನು ಬಳಸಿ ನಡೆಸಿದ ದಾಳಿಯಿಂದ ಕೈವ್‌ನಲ್ಲಿ ನಾಲ್ವರು ಮೃತಪಟ್ಟಿದ್ದು, ೨೫ ಮಂದಿ ಗಾಯಗೊಂಡಿದ್ದಾರೆ. ಡಿಸೆಂಬರ್ ಅಂತ್ಯದಲ್ಲಿ ವ್ಲಾಡಿಮಿರ್ ಪುಟಿನ್ ಅವರ ನಿವಾಸದ ಮೇಲೆ ಉಕ್ರೇನ್ ನಡೆಸಿದ ಡ್ರೋನ್ ದಾಳಿಗೆ ಪ್ರತಿಕ್ರಿಯೆಯಾಗಿ ಈ ದಾಳಿ ನಡೆಸಲಾಗಿದೆ ಎಂದು ರಷ್ಯಾದ ರಕ್ಷಣಾ ಸಚಿವಾಲಯ ತಿಳಿಸಿದೆ. ಒರೆಶ್ನಿಕ್ ಜೊತೆಗೆ ೧೩ ಬ್ಯಾಲಿಸ್ಟಿಕ್ ಕ್ಷಿಪಣಿಗಳು ರಾತ್ರೋರಾತ್ರಿ ಇಂಧನ ಸೌಲಭ್ಯಗಳು ಮತ್ತು ನಾಗರಿಕ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡವು, ಜೊತೆಗೆ ೨೨ ಕ್ರೂಸ್ ಕ್ಷಿಪಣಿಗಳು ಮತ್ತು ೨೪೨ ಡ್ರೋನ್‌ಗಳು ಇದ್ದವು ಎಂದು ಉಕ್ರೇನಿಯನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ತಿಳಿಸಿದ್ದಾರೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>